ಅ) ರಾಜ್ಯದಲ್ಲಿರುವ ಸರ್ಕಾರಿ ನೌಕರರ ಸಂಖ್ಯೆ ಎಷ್ಟು (ಎ, ಬಿ, ಸಿ ಮತ್ತು ಡಿ ಹುದ್ದೆ ವಿವರ ಒದಗಿಸುವುದು);

ಆ) ಸರ್ಕಾರಿ ನೌಕರರುಗಳಿಗೆ 6ನೇ ವೇತನವನ್ನು ಜಾರಿಗೆ ಮಾಡುವ ಉದ್ದೇಶ ಸರ್ಕಾರದ ಮುಂದೆ ಇದೆಯೇ;

ಇ) ಹಾಗಿದ್ದಲ್ಲಿ, ಎಂದಿನಿಂದ ಜಾರಿಗೊಳಿಸುವುದು;

ಈ) ಆಯೋಗವನ್ನು ರಚಿಸಿದ್ದರೆ ಸಮಿತಿ ಸದಸ್ಯರ ಹೆಸರುಗಳನ್ನು ಒದಗಿಸುವುದು?

ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು)

ಅ) ರಾಜ್ಯದಲ್ಲಿರುವ ಸರ್ಕಾರಿ ನೌಕರರ ಒಟ್ಟು ಸಂಖ್ಯೆ 5,31,552.

ಈ ಹುದ್ದೆಗಳ ವಿವರ ಕೆಳಕಂಡಂತಿವೆ:

ವರ್ಗ	ಹುದ್ದೆಗಳ ಸಂಖ್ಯೆ
ಎ	14,251
ಬಿ	36,801
ಸಿ	4,22,956
ಡಿ	57,544

ಆ) 2011–12ರ ಆಯವ್ಯಯ ಭಾಷಣದಲ್ಲಿ ವೇತನ ಸಮಿತಿಯನ್ನು ರಚಿಸಲಾಗುವುದು ಎಂದು ಘೋಷಿಸಲಾಗಿದೆ.

ಇ) ವೇತನ ಸಮಿತಿಯು ವರದಿಯನ್ನು ನೀಡಿದ ನಂತರ ಅದರಂತೆ ಕ್ರಮ ಕೈಗೊಳ್ಳಲಾಗುವುದು.

ಈ) ಇನ್ನೂ ರಚಿತವಾಗಿರುವುದಿಲ್ಲ.

ಪ್ರವಾಸಿ ಟ್ಯಾಕ್ಸಿಗಳನ್ನು ವಿತರಿಸುವುದು

380 (4)21 ಶ್ರೀ ಬಚ್ಚೇಗೌಡ ಕೆ.ಪಿ. (ಚಿಕ್ಕಬಳ್ಳಾಪುರ) ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ಯುವಜನಸೇವೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2010–11ನೇ ಸಾಲಿನಲ್ಲಿ ಪ್ರವಾಸೋದ್ಯಮ ಇಲಾಖೆ ವತಿಯಿಂದ ಚಿಕ್ಕಬಳ್ಳಾಪುರ ಜಿಲ್ಲೆಗೆ ಎಷ್ಟು ಪ್ರವಾಸಿ ಟ್ಯಾಕ್ಸಿಗಳನ್ನು ವಿತರಿಸಲಾಗಿದೆ (ತಾಲ್ಲೂಕುವಾರು ವಿವರಗಳನ್ನು ನೀಡುವುದು);

ಆ) ಹಾಗಿದ್ದಲ್ಲಿ, ಈ ಪ್ರವಾಸಿ ಟ್ಯಾಕ್ಸಿಗಳ ವಿತರಣೆಗೆ ಫಲಾನುಭವಿಗಳನ್ನು ಆಯ್ಕೆ ಮಾಡಲು ಸರ್ಕಾರ ಅನುಸರಿಸಿರುವ ಮಾನದಂಡಗಳೇನು; (ವಿವರ ನೀಡುವುದು)

ಇ) 2011–12ನೇ ಸಾಲಿನಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಗೆ ಎಷ್ಟು ಪ್ರವಾಸಿ ಟ್ಯಾಕ್ಸಿಗಳನ್ನು ವಿತರಿಸಲು ಗುರಿ ಇಟ್ಟುಕೊಳ್ಳಲಾಗಿದೆ.

ಈ) ಹಿಂದುಳಿದ, ಅಲ್ಪಸಂಖ್ಯಾತ ಮತ್ತು ದಲಿತ ವರ್ಗದವರಿಗೆ ಮಾತ್ರವೇ ಪ್ರವಾಸಿ ಟ್ಯಾಕ್ಸಿಗಳನ್ನು ವಿತರಿಸಲಾಗುತ್ತಿದೆಯೇ;

ಉ) ಹಾಗಿದ್ದಲ್ಲಿ, ಆರ್ಥಿಕವಾಗಿ ಹಿಂದುಳಿದಿರುವ ಬೇರೆ ಜಾತಿಯವರಿಗೂ ಪ್ರವಾಸಿ ಟ್ಯಾಕ್ಸಿಗಳನ್ನು ವಿತರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಊ) ಹಾಗಿದ್ದಲ್ಲಿ, ಯಾವಾಗಿನಿಂದ ವಿತರಿಸಲಾಗುವುದು?

ಜಿ. ಜನಾರ್ಧನರೆಡ್ಡಿ (ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ಯುವಜನಸೇವೆ ಸಚಿವರು)

ಅ) 2010–11ನೇ ಸಆಲಿನಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ 30 ಪ್ರವಾಸಿ ಟ್ಯಾಕ್ಸಿಗಳನ್ನು ವಿತರಿಸಲಾಗುತ್ತಿದೆ. ಈ ಸಂಬಂಧ ಆಹ್ವಾನಿಸಲಾಗಿರುವ ಅರ್ಜಿಗಳನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಿರುವ ಸಮಿತಿಯಲ್ಲಿ ಪರಿಶೀಲಿಸಲಾಗುತ್ತಿದೆ. ಫಲಾನುಭವಿಗಳನ್ನು ಆಯ್ಕೆ ಮಾಡಿದ ನಂತರ ತಾಲ್ಲೂಕುವಾರು ವಿವರಗಳು ಲಭ್ಯವಾಗುತ್ತವೆ.

ಆ) ಫಲಾನುಭವಿಗಳ ಆಯ್ಕೆ ಮಾಡಲು ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ.

1) ಅಭ್ಯರ್ಥಿ ಹತ್ತನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು.

2) ಅಭ್ಯರ್ಥಿಗಳು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿರಬೇಕು ಹಾಗೂ ತಹಶೀಲ್ದಾರರಿಂದ ಪಡೆದ ಜಾತಿ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕು.

3) ಅಭ್ಯರ್ಥಿಯು ಮ್ಯಾಕ್ಸಿ ಕ್ಯಾಬ್ (ಲಘುವಾಹನ) ಓಡಿಸಲು ಆರ್.ಟಿ.ಒ. ರವರಿಂದ ಲೈಸನ್ಸು ಹಾಗೂ ಬ್ಯಾಡ್ಜು ಪಡೆದಿರಬೇಕು.

4) ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳ ವರಮಾನ ರೂ. 40,000/–ಗಳು ಹಾಗೂ ಪಟ್ಟಣ/ನಗರ ಪ್ರದೇಶದ ಅಭ್ಯರ್ಥಿಗಳ ವರಮಾನ ರೂ. 55000/–ಗಳ

ಒಳಗಿರಬೇಕು. ತಹಸೀಲ್ದಾರರಿಂದ ಪಡೆದ ಆದಾಯ ಪ್ರಮಾಣ ಪತ್ರ ಸಲ್ಲಿಸಬೇಕು.

5) ಅಭ್ಯರ್ಥಿಗಳ ವಯೋಮಿತಿ 20 ರಿಂದ 40 ವರ್ಷದೊಳಗಿರಬೇಕು.

6) ಡಾ: ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮರವರಿಂದ ಈ ರೀತಿಯ ಸೌಲಭ್ಯ ಪಡೆದುಕೊಳ್ಳದೇ ಇರುವ ಬಗ್ಗೆ ದೃಢೀಕರಣ ಪತ್ರ ಲಗತ್ತಿಸಿರಬೇಕು.

7) ನಗರಸಭೆ/ಪಟ್ಟಣ ಪಂಚಾಯಿತಿ/ಗ್ರಾಮ ಪಂಚಾಯಿತಿಗಳಿಂದ ಈ ರೀತಿಯ ಸೌಲಭ್ಯ ಪಡೆಯದೇ ಇರುವ ಬಗ್ಗೆ ಅವರಿಂದ ದೃಢೀಕರಣ ಪತ್ರ ಪಡೆದು ಸಲ್ಲಿಸಬೇಕು.

8) ತಹಶೀಲ್ದಾರ/ನಗರಸಭೆ/ಪಟ್ಟಣ ಪಂಚಾಯಿತಿ/ಗ್ರಾಮ ಪಂಚಾಯಿತಿ ಗಳಿಂದ ವಾಸ ಸ್ಥಳ ದೃಢೀಕರಣ ಪತ್ರ ಪಡೆದು ಸಲ್ಲಿಸಬೇಕು.

9) ಪಡಿತರ ಚೀಟಿ/ಚುನಾವಣಾ ಗುರುತಿನ ಚೀಟಿ ಪ್ರತಿ ಲಗತ್ತಿಸಬೇಕು.

10) ಅರ್ಜಿದಾರರು ಹಾಗೂ ಅವರ ತಂದೆ ತಾಯಿ ಯಾವುದೇ ಸರ್ಕಾರಿ ನೌಕರಿಯಲ್ಲಿ ಇರಕೂಡದು. ಈ ಬಗ್ಗೆ ತಹಶೀಲ್ದಾರರು/ನಗರಸಭೆ/ಪಟ್ಟಣ ಪಂಚಾಯಿತಿ/ಗ್ರಾಮ ಪಂಚಾಯಿತಿಗಳಿಂದ ಪಡೆದ ದೃಢೀಕರಣ ಪತ್ರ ಸಲ್ಲಿಸಬೇಕು.

ಇ) ಗುರಿಯನ್ನು ಇನ್ನೂ ನಿಗದಿಪಡಿಸಬೇಕಾಗಿದೆ.

ಈ) ಈ ಯೋಜನೆಗಾಗಿ ಅನುದಾನವನ್ನು ಪರಿಶಿಷ್ಟ ಜಾತಿ ಉಪ ಯೋಜನೆ ಮತ್ತು ಗಿರಿಜನ ಉಪ ಯೋಜನೆ ಅಡಿಯಲ್ಲಿ ಒದಗಿಸಲಾಗಿದೆ. ಹಾಗಾಗಿ, ಪ್ರವಾಸಿ ಟ್ಯಾಕ್ಸಿಗಳನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಮಾತ್ರ ವಿತರಿಸಲಾಗುತ್ತಿದೆ.

ಉ) ಈ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಊ) ಉದ್ಭವಿಸುವುದಿಲ್ಲ.

ಬಸವಕಲ್ಯಾಣ ಕ್ಷೇತ್ರದಲ್ಲಿ ಕಳೆದ ಮೂರು ವರ್ಷಗಳ ಅವಧಿಯಲ್ಲಿ ನಿರ್ಮಿಸಿರುವ ಮನೆಗಳ ಕುರಿತು

381 (742) ಶ್ರೀ ಬಸವರಾಜ ಪಾಟೀಲ್ ಅಟ್ಟೂರು (ಬಸವಕಲ್ಯಾಣ) ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?